# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 769 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12-12-2023. |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರಸ್ತುತ ರಾಜ್ಯದಲ್ಲಿರುವ ಒಟ್ಟು ಇಂದಿರಾ ಕ್ಯಾಂಟೀನ್‌ಗಳು ಎಷ್ಟು; ಹಾಗೂ ಹೊಸದಾಗಿ ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲು ನಿರ್ಧರಿಸಲಾಗಿದೆಯೇ; ಹಾಗಿದ್ದಲ್ಲಿ, ಒಟ್ಟು ಎಷ್ಟು ಇಂದಿರಾ ಕ್ಯಾಂಟೀನ್‌ಗಳನ್ನು ಯಾವ-ಯಾವ ಸ್ಥಳಗಳಲ್ಲಿ ತೆರೆಯಲು ನಿರ್ಧರಿಸಲಾಗಿದೆ; | ಪ್ರಸ್ತುತ ರಾಜ್ಯದಲ್ಲಿ ಒಟ್ಟು 197 ಇಂದಿರಾ ಕ್ಯಾಂಟೀನ್‌ಗಳು ಇರುತ್ತದೆ. ಹೊಸದಾಗಿ 185 ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲು ಸರ್ಕಾರದ ಆದೇಶ ಸಂಖ್ಯೆ ನಅಇ:162:ಎಸ್.ಎಫ್.ಸಿ 2023 ದಿನಾಂಕ:30.11.2023 ರನ್ವಯ ಆದೇಶಿಸಲಾಗಿರುತ್ತದೆ.<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತುತ ಒಟ್ಟು 197 ಇಂದಿರಾ ಕ್ಯಾಂಟೀನ್‌ಗಳು ಮತ್ತು 05 ಮೊಬೈಲ್ ಇಂದಿರಾ ಕ್ಯಾಂಟೀನ್‌ಗಳು ಕಾರ್ಯ ನಿರ್ವಹಿಸುತ್ತಿವೆ ಹಾಗೂ ದುರಸ್ಥಿ ಅವಶ್ಯವಿರುವ 19 ಮೊಬೈಲ್ ಇಂದಿರಾ ಕ್ಯಾಂಟೀನ್‌ಗಳ ದುರಸ್ಥಿ ಕಾರ್ಯ ನಡೆಯುತ್ತಿದ್ದು, ಶೀಘ್ರವೇ ಈ ಮೊಬೈಲ್ ಕ್ಯಾಂಟೀನ್‌ಗಳನ್ನು ಪ್ರಾರಂಭಿಸಲಾಗುವುದು.<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಇಂದಿರಾ ಕ್ಯಾಂಟೀನ್‌ಗಳ ಜೊತೆಗೆ ಹೆಚ್ಚುವರಿಯಾಗಿ 50 ಇಂದಿರಾ ಕ್ಯಾಂಟೀನ್‌ಗಳನ್ನು ಸ್ಥಾಪಿಸಲು ಅನುಮತಿ ನೀಡಿದ್ದು, ಹೊಸದಾಗಿ ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲು ಸ್ಥಳಗಳನ್ನು ಗುರುತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ವಿಧಾನಸೌಧ, ವಿಕಾಸಸೌಧ ಮತ್ತು ಬಹು ಮಹಡಿ ಕಟ್ಟಡದ ವ್ಯಾಪ್ತಿಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಹೊಸದಾಗಿ ಇಲ್ಲಿ ಇಂದಿರಾ ಕ್ಯಾಂಟೀನ್ ಸ್ಥಾಪಿಸುವ ಉದೇಶವಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ವ್ಯಾಪ್ತಿಗಳಲ್ಲಿ ಇಂದಿರಾ ಕ್ಯಾಂಟೀನ್‌ಗಳನ್ನು ಸ್ಥಾಪಿಸಲಾಗುವುದು? (ವಿವರ ನೀಡುವುದು) | ಈ ಸ್ಥಳದಲ್ಲಿ ಹೊಸದಾಗಿ ಇಂದಿರಾ ಕ್ಯಾಂಟೀನ್ ಸ್ಥಾಪಿಸಲು ಸ್ಥಳ ಗುರುತಿಸಲಾಗುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. |
| ಇ | ಯಾವ-ಯಾವ ಸಂಸ್ಥೆಗಳಿಗೆ ಈ ಇಂದಿರಾ ಕ್ಯಾಂಟೀನ್ನಳ ನಿರ್ವಹಣೆಯನ್ನು ವಹಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು) | ಜಿಲ್ಲಾಧಿಕಾರಿಗಳ ಹಂತದಲ್ಲಿ ಟೆಂಡರ್ ಕರೆದು ಆಹಾರ ಸರಬರಾಜು ಮಾಡುವ ನಿರ್ವಹಣೆಯನ್ನು ವಹಿಸಲಾಗಿರುತ್ತದೆ, ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ,<br>ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಇಂದಿರಾ ಕ್ಯಾಂಟೀನ್‌ಗಳ ಆಹಾರ ಸರಬರಾಜು ಮಾಡಲು ಗುತ್ತಿಗೆ ಪಡೆದಿರುವ ಸಂಸ್ಥೆಗಳ ವಿವರ ಈ ಕೆಳಕಂಡಂತಿರುತ್ತದೆ:<br>1. ಪೂರ್ವ ವಲಯ - ಶ್ರೀ ಗಿರಿಜಾಶಾಸ್ತ್ರಿ, ಮೆಮೋರಿಯಲ್ ಟ್ರಸ್ಟ್, ಅದಮ್ಯ ಚೇತನ ಸಂಸ್ಥೆ. |

| | | |
|---|---|---|
| | | 2. ಪಶ್ಚಿಮ, ದಕ್ಷಿಣ, ಬೊಮ್ಮನಹಳ್ಳಿ ವಲಯಗಳು- ಮೆ|| ಚೆಫ್‌ಟಾಕ್ ಫುಡ್ ಅಂಡ್ ಹಾಸ್ಪಿಟಾಲಿಟಿ ಸರ್ವೀಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ.<br>3. ಯಲಹಂಕ, ಮಹದೇವಪುರ, ದಾಸರಹಳ್ಳಿ ಮತ್ತು ರಾಜರಾಜೇಶ್ವರಿನಗರ ವಲಯಗಳು – ಮೆ|| ರಿವಾರ್ಡ್ ಸಂಸ್ಥೆ. |

ಸಂಖ್ಯೆ:ನಅಇ 291 ಎಸ್‌ಎಫ್‌ಸಿ 2023

15/12/2023

**(ಬಿ ಎಸ್ ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು